ಶ್ರೀ ಚೌಡರೆಡ್ಡಿ (ಚಿಂತಾಮಣಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಬಾಗೇಪಲ್ಲಿ ತಾಲ್ಲೂಕು ಚೇಳೂರು ಹೋಬಳಿ ಪಸುವುಲವಾರಿನಲ್ಲಿ ಗ್ರಾಮದಲ್ಲಿನ ಪ್ರಾಥಮಿಕ ಶಾಲಾ ಕಟ್ಟಡದ ವಾರ್ಷಿಕ ರಿಪೇರಿಗೆಂದು ಸರ್ಕಾರದಿಂದ ಗುತ್ತಿಗದಾರರಿಗೆ ಹಣ ಬಿಡುಗಡೆಯಾಗಿದ್ದರೂ ರಿಪೇರಿ ಕೆಲಸ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಹಾಗಿದ್ದರೆ ಇದರ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಎಚ್. ವಿಶ್ವನಾಥ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಹೌದು ಬಂದಿದೆ.

ಆ) ಕಾಮಗಾರಿ ಕೆಲಸವನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಚಿಂತಾಮಣಿ ಕ್ಷೇತ್ರದ ನೀರಿನ ಟ್ಯಾಂಕ್ ನಿರ್ಮಾಣ.

1790 (2248)

ಶ್ರೀ ಚೌಡರೆಡ್ಡಿ(ಚಿಂತಾಮಣಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಚೇಳೂರಿನಲ್ಲಿ ಎನ್ಆರ್ಡಬ್ಲ್ಯು ಸ್ಕೀಮ್ ನಲ್ಲಿ ನೀರಿನ ಟ್ಯಾಂಕ್ ನಿರ್ಮಾಣವಾಗಿ 25 ವರ್ಷವಾಗಿದ್ದು, ಇದು ಬೀಳುವ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದರೆ ಹೊಸ ನೀರಿನ ಟ್ಯಾಂಕ್ ನಿರ್ಮಾಣಕ್ಕೆ ಸರ್ಕಾರ ಕ್ರಮ ಕೈಗೊಂಡಿದ್ದರೆ ಅದರ ಅಂದಾಜು ವೆಚ್ಚದ ವಿವರಗಳನ್ನು ಒದಗಿಸುವುದು?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಚೇಳೂರು ಗ್ರಾಮದಲ್ಲಿರುವ ನೀರಿನ ಟ್ಯಾಂಕ್ ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಹೊಸ ಮೇಲ್ಮಟ್ಟದ ನೀರಿನ ಟ್ಯಾಂಕ್ ನಿರ್ಮಾಣಕ್ಕಾಗಿ 2001-02 ನೇ ಸಾಲಿನ ವಾರ್ಷಿಕ ಯೋಜನೆಯಲ್ಲಿ ರೂ.3.00 ಲಕ್ಷ ಅನುದಾನವನ್ನು ಒದಗಿಸಲಾಗಿದೆ.

ಕರ್ನಾಟಕ ಮೆಡಿಕಲ್ ಸರ್ವಿಸಸ್ ನಿಯಮಗಳಿಗೆ ತಿದ್ದುಪಡಿ.

1791(2249)

ಶ್ರೀ ಚೌಡರೆಡ್ಡಿ(ಚಿಂತಾಮಣಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಮೆಡಿಕಲ್ ಸರ್ವಿಸಸ್ (ಟೀಚಿಂಗ್ ಅಂಡ್ ಟೆಕ್ನಿಕಲ್ ಪರ್ಸನಲ್ ಇನ್ ಮೆಡಿಕಲ್ ಅಂಡ್ ಡೆಂಟಲ್ ಕಾಲೇಜ್ ರಿಕ್ರೂಟ್‌ಮೆಂಟ್ 1964) ನಿಯಮಗಳಿಗೆ ತಿದ್ದುಪಡಿ ಮಾಡುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದಕ್ಕೆ ಸಂಬಂಧಿಸಿದಂತೆ, ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ: 3-12-2000 ಕೊನೆಯ ದಿನಾಂಕವಿರುವುದು ನಿಜವೇ?

ಇ) ಈ ತಿದ್ದುಪಡಿಯನ್ನು ಸುಪ್ರೀಂಕೋರ್ಟಿನ ತೀರ್ಪಿನಂತೆ ಅರ್ಹತೆ ಆಧಾರದ ಮೇಲೆ ಮಾಡಬೇಕಾಗಿದೆ ಎಂಬುದು ಸರ್ಕಾರಕ್ಕೆ ಅರಿವಿದೆಯೇ?

ಈ) ಈ ತಿದ್ದುಪಡಿಗಳನ್ನು ಸದ್ಯದಲ್ಲಿಯೇ ಮಾಡಬೇಕೆಂಬ ಆಲೋಚನೆ ಸರ್ಕಾರಕ್ಕಿದೆಯೇ?

ಶ್ರೀಮತಿ ನಫೀಸ್ ಫಜಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು):

ಅ) ಹೌದು. ಪ್ರಾಂಶುಪಾಲರ ಹುದ್ದೆಗೆ ಈಗಾಗಲೇ ತಿದ್ದುಪಡಿ ಮಾಡಲಾಗಿದೆ.

ಆ) ಪ್ರಾಂಶುಪಾಲರ ಹುದ್ದೆಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸಲು ದಿನಾಂಕ 3-12-2000 ಕೊನೆಯ ದಿನಾಂಕ ನಿಗದಿಪಡಿಸಲಾಗಿತ್ತು.

ಇ) ಸುಪ್ರೀಂಕೋರ್ಟಿನ ತೀರ್ಪಿನ ಮೇರೆಗೆ ಪ್ರಾಂಶುಪಾಲರು, ಡೆಂಟಲ್ ಕಾಲೇಜ್, ಬೆಂಗಳೂರು ಇವರ ಹುದ್ದೆಗೆ ಈಗಾಗಲೇ ತಿದ್ದುಪಡಿ ಮಾಡಲಾಗಿದೆ.

ಈ) ತಿದ್ದುಪಡಿ ಮಾಡಲಾಗಿದೆ.